**ಎರಡನೇ ಅಪರ ಸಿವಿಲ್ ನ್ಯಾಯಾಲಯ ಮತ್ತು ಜೆ. ಎಂ.ಎಫ್. ಸಿ, ಕನಕಪುರ**
**C.C. 2269/2022**

**CW1 PW2**

| | | |
|---|---|---|
| ಹೆಸರು | : | ಶಾಂತಮ್ಮ |
| ತಂದೆಯ ಹೆಸರು | : | ದಾಸಯ್ಯ |
| ವಯಸ್ಸು | : | **40** |
| ಉದ್ಯೋಗ | : | ಗೃಹಿಣಿ |
| ವಾಸ | : | ಮೇಡರಹಳ್ಳಿ |

**ಸಾಕ್ಷಿಯನ್ನು ಕರೆಸಲಾಯಿತು. ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ಯವರಿಂದಃ ದಿನಾಂಕ 19.06.2026.**

ನ್ಯಾಯಾಲಯ ಮುಂದಿರುವ ಆರೋಪಿತ ಗೊತ್ತು. ಚಾಸಾ-2 ನನ್ನ ಮಗ , ಚಾಸಾ-3 ರಿಂದ 7 ಗೊತ್ತು .

ಈ ಪ್ರಕರಣದ ಬಗ್ಗೆ ನನಗೆ ಏನೂ ಗೊತ್ತಿರುವುದಿಲ್ಲ , ನಾನು ಪೋಲಿಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸ.ಸ.ಅ. ರವರು ಅನುಮತಿ ಕೋರಿದ್ದಾರೆ. ಅನುಮತಿಸಲಾಯಿತು).

**ಪಾಟೀ ಸವಾಲು : ಎ ಪಿ ಪಿ ಯವರಿಂದಃ**

ದಿನಾಂಕಃ 05.06.2022 ರಂದು ಸಂಜೆ 4.30 ಗಂಟೆ ಸಮಯದಲ್ಲಿ ದೊಡ್ಡ ಮುದುವಾಡಿ ಗ್ರಾಮದ ಗೂಗರೆ ದೊಡಿ ರಸ್ತೆ ಪಕ್ಕದಲ್ಲಿ ಲೋಕೇಶ್ ರವರ ಖಾಲಿ ನಿವೇಶನದಲ್ಲಿ ಆರೋಪಿ ಸಾಕ್ಷಿ 2 ರವರನ್ನು ಅಡ್ಡ ಗಟ್ಟಿ ಅವಾಚ್ಯ ಶಬ್ದಗಳಿಂದ ಬೈದು ಕಬ್ಬಿಣದ ಮಚ್ಚಿ ನಿಂದ ತಲೆಗೆ ಹೊಡೆದಿರುತ್ತಾರೆ , ಸಾಕ್ಷಿ 2 ರವರ ತಲೆಯನೆತ್ತಿ ಮೇಲೆ

ಏಟಾಗಿರುತ್ತದೆ. ಎಡಗೈ ತೋರು ಬೆರಳು ಮತ್ತು ಉಂಗುರದ ಬೆರಳಿಗೆ ಗಾಯವಾಗಿರುತ್ತದೆ , ಆರೋಪಿ ಚಾಸಾ-2 ರವರಿಗೆ ಜೀವ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ.

ಸಾಕ್ಷಿದಾರರು ದೂರಿನಲ್ಲಿರುವ ಹಬ್ಬೆಟ್ಟಿನ ಗುರುತನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-2 ಎ ಎಂದು ಗುರುತಿಸಲಾಯಿತು. ದೂರನ್ನು ನಿಪಿ-2 ಎಂದು ಗುರುತಿಸಲಾಯಿತು.

ಸಾಕ್ಷಿದಾರರು ಮಹಜರ್ ನಲ್ಲಿರುವ ಹಬ್ಬೆಟ್ಟಿನ ಗುರುತನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-3 ಎ ಎಂದು ಗುರುತಿಸಲಾಯಿತು. ಮಹಜರ್ ಅನ್ನು ನಿಪಿ-3 ಎಂದು ಗುರುತಿಸಲಾಯಿತು.

ಸಾಕ್ಷಿ ನಿರಾಕರಿಸಿದ ಹೇಳಿಕೆ ಭಾಗನ್ನು ನಿಪಿ4 ಎಂದು ಗುರುತಿಸಲಾಯಿತು. ಆರೋಪಿಯ ಜೊತೆ ರಾಜೀ ಮಾಡಿಕೊಂಡು ಆರೋಪಿಗೆ ಸಹಾಯ ಮಾಡಲು ಅವರ ಹೇಳಿಕೆ ಮೇರೆಗೆ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**<u>ವಾಟೀ ಸವಾಲು: ಇಲ್ಲ</u>**
**<u>ಮರು ವಿಚಾರಣೆ : ಇಲ್ಲ</u>**

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನವನ್ನು ಗಣಕೀಕರಣ ಮಾಡಲಾಯಿತು)

ಓ ಹೇ ಕೇ ಸ ಒ

ಎರಡನೇ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಕನಕಪುರ